ಕನ್ನಡಪ್ರಭ

**ನೌಕರಿ** | 2016ರಿಂದ 13800 ನೌಕರರು ನಿವೃತ್ತಿ | ತೆರವಾದ ಹುದ್ದೆಗಳಿಗೆ ಮೊದಲ ಹಂತದ ನೇಮಕಾತಿ: ಸಚಿವ

# 8000 ಸಾರಿಗೆ ಹುದ್ದೆ ಭರ್ತಿ: ರಾಮಲಿಂಗಾರೆಡ್ಡಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಸಾರಿಗೆ ಇಲಾಖೆಯಲ್ಲಿ ಶೀಘ್ರ 8 ಸಾವಿರ ಹುದ್ದೆಗಳ ನೇಮಕಾತಿಗೆ ಸೂಚನೆ ನೀಡಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.



ಶನಿವಾರ ವಿಧಾನಸೌಧದಲ್ಲಿ ಮಾತನಾಡಿದ ಅವರು, 2016 ರಿಂದ ಈವರೆಗೂ ಸುಮಾರು 13,800 ನೌಕರರು ನಿವೃತ್ತರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಮೊದಲ ಹಂತದಲ್ಲಿ ಅಂದಾಜು ಎಂಟು ಸಾವಿರ ಹುದ್ದೆಗಳ ನೇಮಕಾತಿಗೆ ಸೂಚನೆ ನೀಡಲಾಗಿದೆ. ತ್ವರಿತವಾಗಿ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಹೇಳಿದರು.

ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿಯವರು ಸಭೆ ನಡೆಸಿದ್ದು, ಸಮಸ್ಯೆಗಳನ್ನು ಅವರ ಗಮನಕ್ಕೆ ತಂದಿದ್ದೇವೆ. ಪರಿಹರಿಸುವ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಶಕ್ತಿ ಯೋಜನೆಯಡಿ ಈವರೆಗೆ 80 ಕೋಟಿ ಮಹಿಳೆಯರು ಪ್ರಯಾಣಿಸಿದ್ದು, ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಐದು ಸಾವಿರಕ್ಕೂ ಹೆಚ್ಚು ಹೊಸ ಬಸ್‌ಗಳು ಬರಲಿವೆ. ಈ ಹಿಂದಿನ ಸರ್ಕಾರ ಕಳೆದ 4 ವರ್ಷಗಳಿಂದ ಬಸ್ ಖರೀದಿ ಮಾಡಿರಲಿಲ್ಲ, ಈಗ ಎರಡು ಸಾವಿರ ಕೋಟಿ ರು.ವೆಚ್ಚದಲ್ಲಿ ಎಲ್ಲ ರೀತಿಯ ಬಸ್ ಖರೀದಿ ಮಾಡುತ್ತೇವೆ ಎಂದರು.

**ವಾಹನ ತೆರಿಗೆ ರಿಯಾಯಿತಿಗೆ ಮನವಿ:** ಮುಖ್ಯಮಂತ್ರಿಯವರ ಬಳಿ ವಾಹನಗಳ ತೆರಿಗೆಗೆ ರಿಯಾಯಿತಿ ಕೊಡುವಂತೆ ಕೋರಿದ್ದೇವೆ. 5 ರಿಂದ 15 ಲಕ್ಷದ ವಾಹನಗಳಿಗೆ ಒಂದು ಬಾರಿಯ ತೆರಿಗೆ (ಲೈಫ್ ಟ್ಯಾಕ್ಸ್ ) ಹಾಕಲಾಗುತ್ತಿತ್ತು. ಈ ಬಗ್ಗೆ ಕೆಲವು ಸಂಘ ಟನೆಗಳು ರಿಯಾಯಿತಿ ನೀಡುವಂತೆ ಮನವಿ ಮಾಡಿದ್ದವು. ಹಳದಿ ಫಲಕ ವಾಹನಗಳವರು ಸಾಲ ತೆಗೆದುಕೊಳ್ಳುತ್ತಾರೆ. ಹಳೆ ಗಾಡಿ ಖರೀದಿಸುತ್ತಾರೆ. ಹೀಗಾಗಿ ಹಿಂದಿನ ರೀತಿಯೇ ಟ್ಯಾಕ್ಸ್ ಇರಲಿದೆ ಎಂದು ಹೇಳಿದರು.

**ಪ್ರತಿಪಕ್ಷಗಳ ಶಾಸಕರು ರಾಜೀನಾಮೆ ಕೊಡಲಿ:** ಅಕ್ರಮ ಆಸ್ತಿಗೆ ಸಂಬಂಧಿಸಿದಂತೆ ಸಿಬಿಐ ತನಿಖೆಗೆ ಹೈಕೋರ್ಟ್ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಜೀನಾಮೆ ಕೊಡಬೇಕೆಂದು ಬಿಜೆಪಿ ಒತ್ತಾಯಿಸಿರುವ ಕುರಿತು ಪ್ರತಿಕ್ರಿಯಿಸಿದ ರಾಮಲಿಂಗಾರೆಡ್ಡಿ ಅವರು, ಉಪ ಮುಖ್ಯಮಂತ್ರಿ ಆಗಿರುವುದರಿಂದ ವಿರೋಧಪಕ್ಷದವರು ಸಹಜವಾಗಿಯೇ ಕಾಂಗ್ರೆಸ್ ಪಕ್ಷದ ಅಧ್ಯಕ್ಷರನ್ನು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿ ಮಾಡುತ್ತಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಮಾಡಿರುವ ವೆಚ್ಚ, ಬಿಟ್‌ಕಾಯಿನ್, 40 ಪರ್ಸೆಂಟ್ ಕಮೀಷನ್, ಪಿಎಸ್‌ಐ ನೇಮಕಾತಿ ಹಗರಣವೂ ತನಿಖೆಯಲ್ಲಿದೆ. ಇದಕ್ಕೆ ಸಂಬಂಧಪಟ್ಟವರೆಲ್ಲ ವಿರೋಧ ಪಕ್ಷದಲ್ಲಿ ಶಾಸಕರಾಗಿ ಇದ್ದಾರೆ. ಅವರೂ ರಾಜೀನಾಮೆ ಕೊಡಬೇಕಲ್ಲವೇ? ಅವರು ರಾಜೀನಾಮೆ ಕೊಟ್ಟರೆ, ಆ ಬಗ್ಗೆ ನಾವು ಡಿ.ಕೆ.ಶಿವಕುಮಾರ್ ಅವರಿಗೆ ಹೇಳಬಹುದು ಎಂದರು.

## ಯಾವ ನಿಗಮಕ್ಕೆ ಎಷ್ಟು ನೇಮಕಾತಿ?

- ಕೆಎಸ್‌ಆರ್‌ಟಿಸಿ: 2 ಸಾವಿರ ಚಾಲಕ ಕಂ ನಿರ್ವಾಹಕ ಹಾಗೂ 300 ತಾಂತ್ರಿಕ ಸಿಬ್ಬಂದಿ
- ಬಿಎಂಟಿಸಿ: 2,500 ನಿರ್ವಾಹಕ
- ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ: 2 ಸಾವಿರ ಚಾಲಕ ಕಂ ನಿರ್ವಾಹಕ
- ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ: 1,619 ಚಾಲನಾ ಸಿಬ್ಬಂದಿ (ಪ್ರಕ್ರಿಯೆ ಪ್ರಾರಂಭವಾಗಿದೆ), 300 ನಿರ್ವಾಹಕ

BENGALURU Edition
Oct 22, 2023 Page No. 06
Powered by : eReleGo.com

# ಚಾಲನಾ, ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಒಪ್ಪಿಗೆ

**ಬೆಂಗಳೂರು:** ಸಾರಿಗೆ ಸಂಸ್ಥೆಯಲ್ಲಿ 8719 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಆರ್ಥಿಕ ಇಲಾಖೆ ಅನುಮತಿ ನೀಡಿದೆ.

- **ಕೆಎಸ್‌ಆರ್‌ಟಿಸಿ : ಡ್ರೈವರ್ ಕಮ್ ಕಂಡಕ್ಟರ್ : 2000**
- **ತಾಂತ್ರಿಕ ಸಿಬ್ಬಂದಿ : 300**
- **ಎನ್‌ಡಬ್ಲ್ಯೂಕೆಆರ್‌ಟಿಸಿ : ಡ್ರೈವರ್ ಕಮ್ ಕಂಡಕ್ಟರ್ 2000**
- **ಬಿಎಂಟಿಸಿ : ಕಂಡಕ್ಟರ್ 2500**

ಸಾರಿಗೆ ಸಂಸ್ಥೆಗಳಲ್ಲಿ ಕಳೆದ ಎಂಟು ವರ್ಷಗಳಿಂದ ಯಾವುದೇ ನೇಮಕ ಪ್ರಕ್ರಿಯೆಯಾಗಿರಲಿಲ್ಲ. ಆದ್ದರಿಂದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ 2016ರಿಂದ ಇಲ್ಲಿಯವರೆಗೆ ಸಿಬ್ಬಂದಿಗಳ ನಿವೃತ್ತಿ ಹಾಗೂ ಇತರೆ ಕಾರಣಗಳಿಂದ 13669 ಖಾಲಿ ಹುದ್ದೆಗಳಿದ್ದವು. ಈ ನಿಟ್ಟಿನಲ್ಲಿ 13,000 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿಗಳ ನೇಮಕಕ್ಕೆ ಸಾರಿಗೆ ಸಂಸ್ಥೆಗಳಿಗೆ ಅನುಮತಿ ನೀಡುವಂತೆ ಸರಕಾರವನ್ನು ಕೋರಲಾಗಿತ್ತು. ಅದರಂತೆ ಮೊದಲನೇ ಹಂತದಲ್ಲಿ 6500 ಚಾಲನಾ ಸಿಬ್ಬಂದಿಗಳಿಗೆ ಹಾಗೂ 300 ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಸರಕಲಾರದಿಂದ ಅನುಮತಿ ದೊರಕಿದೆ.

ಕೆಕೆಆರ್‌ಟಿಸಿಯಲ್ಲಿ ಈಗಾಗಲೇ 1619 ಚಾಲನಾ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಚಾಲನಾ ಪರೀಕ್ಷೆ ನಡೆಯುತ್ತಿದ್ದು, ಜನವರಿ 2024 ರ ಕೊನೆಯಲ್ಲಿ ಅಂತಿಮ ಆಯ್ಕೆಪಟ್ಟಿ ಬಿಡುಗಡೆಗೊಳಿಸಲಾಗುವುದು ಹಾಗೂ 300 ಕಂಡಕ್ಟರ್‌ಗಳ ನೇಮಕಾತಿಗೆ ಅನುಮತಿ ದೊರಕಿದ್ದು, ಅಧಿಸೂಚನೆ ಹೊರಡಿಸುವ ಹಂತದಲ್ಲಿದೆ ಎಂದು ನಿಗಮ ತಿಳಿಸಿದೆ.

# ಸಾರಿಗೆ ಸಂಸ್ಥೆ 8719 ಸಿಬ್ಬಂದಿ ನೇಮಕ

## ಎಂಟು ವರ್ಷಗಳ ಬಳಿಕ ಪ್ರಕ್ರಿಯೆಗೆ ಚಾಲನೆ

**ಬೆಂಗಳೂರು:** ರಾಜ್ಯದಲ್ಲಿ ಶಕ್ತಿ ಯೋಜನೆ ಯಶಸ್ಸಿನ ಬೆನ್ನಲ್ಲೇ ಸಾರಿಗೆ ಸಂಸ್ಥೆಯಲ್ಲಿನ ಸಿಬ್ಬಂದಿ ಕೊರತೆ ನೀಗಿಸಲು ಸರಕಾರ ಮುಂದಾಗಿದೆ. ಸಂಸ್ಥೆಯ 8719 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದೆ. ಸಾರಿಗೆ ಸಂಸ್ಥೆಯಲ್ಲಿ ಕಳೆದ 8 ವರ್ಷಗಳಿಂದ ನೇಮಕ ಪ್ರಕ್ರಿಯೆ ನಡೆದಿರಲಿಲ್ಲ. ಆದ್ದರಿಂದ 13669 ಹುದ್ದೆಗಳು ಖಾಲಿ ಇದ್ದವು. ಆದ್ದರಿಂದ ಇದೀಗ ಮೊದಲ ಹಂತದಲ್ಲಿ 6500 ಚಾಲನಾ ಸಿಬ್ಬಂದಿಯನ್ನು ನೇಮಿಸಲು ಒಪ್ಪಿಗೆ ನೀಡಿದೆ.

# ಚಾಲನಾ ಸಿಬ್ಬಂದಿ ನೇಮಕಕ್ಕೆ ಸರ್ಕಾರದಿಂದ ಗ್ರೀನ್ ಸಿಗ್ನಲ್

**ಬೆಂಗಳೂರು:** ಸಾರಿಗೆ ಸಂಸ್ಥೆಗಳಲ್ಲಿ ಮೊದಲ ಹಂತದಲ್ಲಿ 6,500 ಚಾಲನಾ ಸಿಬ್ಬಂದಿ ಹಾಗೂ 300 ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಸರ್ಕಾರ ಅನುಮತಿ ನೀಡಿದೆ.

ಸಾರಿಗೆ ಸಂಸ್ಥೆಗಳಲ್ಲಿ 8 ವರ್ಷಗಳಿಂದ ಅಂದರೆ 2016ರಲ್ಲಿ ನಡೆದ ನೇಮಕಾತಿ ನಂತರ ಯಾವುದೇ ನೇಮಕಾತಿ ಆಗಿರಲಿಲ್ಲ. ಈ ಸಂಬಂಧ 4 ಸಾರಿಗೆ ಸಂಸ್ಥೆಗಳಲ್ಲಿ 2016 ರಿಂದ ಈವರೆಗೆ ಸಿಬ್ಬಂದಿ ನಿವೃತ್ತಿ ಹಾಗೂ ಇತರ ಕಾರಣಗಳಿಂದ 13,669 ಖಾಲಿ ಹುದ್ದೆಗಳಿದ್ದವು. ಈ ಬಗ್ಗೆ 13,000 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿ ನೇಮಕಾತಿಗೆ ಸಾರಿಗೆ ಸಂಸ್ಥೆಗಳಿಗೆ ಅನುಮತಿ ನೀಡುವಂತೆ ಸರ್ಕಾರವನ್ನು ಕೋರಲಾಗಿತ್ತು. ಸರ್ಕಾರ ಮೊದಲ ಹಂತವಾಗಿ 6,800 ಸಿಬ್ಬಂದಿ ನೇಮಕಕ್ಕೆ ಒಪ್ಪಿಗೆ ನೀಡಿದೆ.

ಕೆಎಸ್ಆರ್‌ಟಿಸಿಯಲ್ಲಿ ಈಗಾಗಲೆ 1619 ಚಾಲನಾ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ ಆರಂಭವಾಗಿದ್ದು, ಚಾಲನಾ ಪರೀಕ್ಷೆ ನಡೆಯುತ್ತಿದೆ. 2024 ಜನವರಿ ಕೊನೆಯಲ್ಲಿ ಅಂತಿಮ ಆಯ್ಕೆಪಟ್ಟಿ ಬಿಡುಗಡೆಗೊಳ್ಳಲಿದೆ. ಕೆಕೆಆರ್‌ಟಿಸಿಯಲ್ಲಿ 300 ಕಂಡಕ್ಟರ್‌ಗಳ ನೇಮಕಾತಿಗೆ ಅನುಮತಿ ದೊರಕಿದ್ದು, ಅಧಿಸೂಚನೆ ಹೊರಡಿಸುವ ಹಂತದಲ್ಲಿದೆ.

## ಸಂಸ್ಥೆವಾರು ನೇಮಕ ವಿವರ

- ಕೆಎಸ್ಆರ್‌ಟಿಸಿ: ಡ್ರೈವರ್ ಕಂ ಕಂಡಕ್ಟರ್-2000
- ತಾಂತ್ರಿಕ ಸಿಬ್ಬಂದಿ: 300
- ಎನ್‌ಡಬ್ಲ್ಯುಕೆಆರ್‌ಟಿಸಿ: ಡ್ರೈವರ್ ಕಂ ಕಂಡಕ್ಟರ್-2000
- ಬಿಎಂಟಿಸಿ: ಕಂಡಕ್ಟರ್-2500

ಸಾರಿಗೆ ಸಂಸ್ಥೆಗಳಲ್ಲಿ ಕಳೆದ 8 ವರುಷಗಳಿಂದ ಅಂದರೆ 2016 ರಲ್ಲಿನ ನೇಮಕಾತಿ ನಂತರ ಯಾವುದೇ ನೇಮಕಾತಿ ಆಗಿರಲಿಲ್ಲ. ಈ ಸಂಬಂಧ 4 ಸಾರಿಗೆ ಸಂಸ್ಥೆಗಳಲ್ಲಿ 2016 ರಿಂದ ಇಲ್ಲಿಯವರೆಗೆ ಸಿಬ್ಬಂದಿಗಳ ನಿವೃತ್ತಿ ಹಾಗೂ ಇತರೆ ಕಾರಣಗಳಿಂದ 13669 ಖಾಲಿ ಹುದ್ದೆಗಳಿದ್ದವು. ಈ ಬಗ್ಗೆ 13000 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಸಾರಿಗೆ ಸಂಸ್ಥೆಗಳಿಗೆ ಅನುಮತಿ ನೀಡುವಂತೆ ಸರ್ಕಾರವನ್ನು ಕೋರಲಾಗಿತ್ತು. ಅದರಂತೆ ಮೊದಲನೇ ಹಂತದಲ್ಲಿ 6500 ಚಾಲನಾ ಸಿಬ್ಬಂದಿಗಳಿಗೆ ಹಾಗೂ 300 ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರದಿಂದ ಅನುಮತಿ ದೊರಕಿದೆ. ಸಂಸ್ಥೆವಾರು ನೇಮಕಾತಿ ವಿವರ ಈ ಕೆಳಕಂಡಂತಿದೆ.

KSRTC: ಡ್ರೈವರ್ ಕಮ್ ಕಂಡಕ್ಟರ್ : 2000

ತಾಂತ್ರಿಕ ಸಿಬ್ಬಂದಿ : 300

NWKRTC : ಡ್ರೈವರ್ ಕಮ್ ಕಂಡಕ್ಟರ್ 2000

BMTC : ಕಂಡಕ್ಟರ್ 2500

KKRTC ಅಲ್ಲಿ ಈಗಾಗಲೇ 1619 ಚಾಲನಾ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಚಾಲನಾ ಪರೀಕ್ಷೆ ನಡೆಯುತ್ತಿದ್ದು, ಜನವರಿ 2024 ರ ಕೊನೆಯಲ್ಲಿ ಅಂತಿಮ ಆಯ್ಕೆಪಟ್ಟಿ ಬಿಡುಗಡೆಗೊಳಿಸಲಾಗುವುದು. ಹಾಗೂ KKRTC ಯಲ್ಲಿ 300 ಕಂಡಕ್ಟರ್ ಗಳ ನೇಮಕಾತಿಗೆ ಅನುಮತಿ ದೊರಕಿದ್ದು, ಅಧಿಸೂಚನೆ ಹೊರಡಿಸುವ ಹಂತದಲ್ಲಿದೆ.

ಒಟ್ಟಾರೆ 8719 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಚಾಲನೆ ದೊರಕಿದೆ